## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ "ಎನ್.ಎಸ್.ಕ್ಯು.ಎಫ್. ಯೋಜನೆಯ ಅನುಷ್ಠಾನ ಮತ್ತು ಪರೀಕ್ಷಾ ಪದ್ಧತಿ ಕುರಿತು.

ಓದಲಾಗಿದೆ:
1. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರುರವರ ಪ್ರಸ್ತಾವನೆ ಸಂ. ಸಿ1 /ಎಸ್.ಎಸ್.ಎಲ್.ಸಿ/ ಎನ್.ಎಸ್.ಕ್ಯು.ಎಫ್./15/2016-17 ದಿನಾಂಕ 30.05.2016
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ಸಂ.ಪಿಯುಇ/ಎನ್ಎಸ್‌ಕ್ಯುಎಫ್/04/2014-15 ದಿನಾಂಕ 28.05.2016

ಪ್ರಸ್ತಾವನೆ:

1. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ತಮ್ಮ ಪ್ರತ್ಯೇಕ ಪ್ರಸ್ತಾವನೆಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು (ಎನ್.ಎಸ್.ಕ್ಯು.ಎಫ್) ಯೋಜನೆಯನ್ನು ರಾಜ್ಯದ 250 ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ 9 ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಅನುಷ್ಠಾನಗೊಳಿಸಲು ಅನುಮತಿಸಿರುತ್ತದೆ ಎಂದು ಉಲ್ಲೇಖಿಸಿರುತ್ತಾರೆ. ಸದರಿ ಯೋಜನೆಯು ನಿರಂತರ ಮುಂದುವರಿಕೆ ಯೋಜನೆಯಾಗಿದ್ದು ಸದರಿ ಯೋಜನೆಯಡಿ ಸ್ವಯಂಪ್ರೇರಿತವಾಗಿ ವೃತ್ತಿ ಶಿಕ್ಷಣ ವಿಷಯಗಳನ್ನು ಆಯ್ಕೆ ಮಾಡಿಕೊಂಡು 12ನೇ ತರಗತಿಯ ನಂತರವೂ ಸ್ನಾತಕೋತ್ತರ ಪದವಿ ಹಂತದವರೆಗೂ ಮುಂದುವರೆಸಬಹುದಾಗಿದೆ ಎಂದು ತಮ್ಮ ಪ್ರಸ್ತಾವನೆಯಲ್ಲಿ ವಿವರಿಸಿರುತ್ತಾರೆ.
2. ಸದರಿ ಯೋಜನೆಯು ಕೈಗಾರಿಕಾ ಚಾಲಿತ ಯೋಜನೆಯಾಗಿದ್ದು, ಉದ್ಯಮದಾರರ ಸಹಭಾಗಿತ್ವದಲ್ಲಿ ನೆರವೇರಿಸಲಾಗುವುದು ಎಂದು ತಿಳಿಸಲಾಗಿದೆ. ಸದರಿ ಯೋಜನೆಯನ್ನು ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ನಿಗಮದ ಸಹಭಾಗಿತ್ವದಲ್ಲಿ ನಿರ್ವಹಿಸಲಾಗುತ್ತಿದೆ ಎಂದು ಸಹ ತಿಳಿಸಲಾಗಿದೆ. ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ, ರೀಟೇಲ್, ಆಟೋಮೋಟಿವ್, ಹೆಲ್ತ್ ಕೇರ್ ಮತ್ತು ಬ್ಯೂಟಿ & ವೆಲ್‌ನೆಸ್ ಸೆಕ್ಟರ್‌ಗಳಲ್ಲಿ ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿರುತ್ತಾರೆ.
3. ಸದರಿ ಯೋಜನೆಯಡಿ ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ವಿದ್ಯಾರ್ಥಿಗಳಿಗೆ, ಅವರು ವ್ಯಾಸಂಗ ಮಾಡುತ್ತಿರುವ ತರಗತಿಯ ಒಂದು ವಿಷಯದಲ್ಲಿ ವಿನಾಯಿತಿ ನೀಡಲು ಮಾರ್ಗಸೂಚಿಯಲ್ಲಿ ಅವಕಾಶವಿದ್ದು ಅದರಂತೆ ರಾಜ್ಯದಲ್ಲಿ ಒಂದು ಭಾಷಾ ವಿಷಯದಲ್ಲಿ

9ಮತ್ತು 10ನೇ ತರಗತಿಯಲ್ಲಿ ತೃತೀಯ ಭಾಷೆ ಹಾಗೂ ಪದವಿ ಪೂರ್ವ ಕಾಲೇಜು ಶಿಕ್ಷಣದಲ್ಲಿ ಒಂದು ಭಾಷೆಯಲ್ಲಿ ವಿನಾಯಿತಿ ನೀಡಲು ನಿರ್ಧರಿಸಲಾಗಿದೆ.

4. ಈ ಹಿನ್ನೆಲೆಯಲ್ಲಿ ಪದವಿ ಪರೀಕ್ಷೆಯ ಪದ್ಧತಿಯಲ್ಲಿ ಅಗತ್ಯ ಮಾರ್ಪಾಡುಗಳನ್ನು ಮಾಡಿಕೊಳ್ಳಲು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷಾ ಮಂಡಳಿಗಳು ಪ್ರಸ್ತಾವನೆಯನ್ನು ಸಲ್ಲಿಸಿರುತ್ತವೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 59 ಎಂಸಿಡಿ 2016, ಬೆಂಗಳೂರು ದಿನಾಂಕ: 16.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಆಯ್ದ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ವೃತ್ತಿ ಶಿಕ್ಷಣ ಕೌಶಲ್ಯ ಚೌಕಟ್ಟು ಯೋಜನೆಯಡಿ ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ಪರೀಕ್ಷಾ ಪದ್ಧತಿಯಲ್ಲಿ ಈ ಕೆಳಗಿನ ಬದಲಾವಣೆಗಳನ್ನು ಮಾಡಿಕೊಳ್ಳಲು ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಮತ್ತು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಸರ್ಕಾರವು ಅನುಮತಿಸಿದೆ.

ಷರತ್ತುಗಳು:

1. 9 ಮತ್ತು 10ನೇ ತರಗತಿಯಲ್ಲಿ ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ತಮ್ಮ ತರಗತಿಯಲ್ಲಿ ತೃತೀಯ ಭಾಷೆಯಿಂದ ವಿನಾಯಿತಿ ಪಡೆದಿರುತ್ತಾರೆ. ಪದವಿ ಪೂರ್ವ ಕಾಲೇಜು ಶಿಕ್ಷಣದಲ್ಲಿ ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ತಮ್ಮ ತರಗತಿಯಲ್ಲಿ ಎರಡು ಭಾಷಾ ವಿಷಯಗಳಿಗೆ ಬದಲಾಗಿ ಒಂದೇ ಭಾಷೆಯನ್ನು ಆಯ್ಕೆ ಮಾಡಿಕೊಳ್ಳಬಹುದು.
2. ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ತಾತ್ವಿಕ (ಥಿಯರಿ) ಪರೀಕ್ಷೆಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಯು ಹಾಗೂ ಪ್ರಾಯೋಗಿಕ ಪರೀಕ್ಷೆಯನ್ನು ಸೆಕ್ಟರ್ ಸ್ಕಿಲ್ ಕೌನ್ಸಿಲ್ ಸಂಸ್ಥೆಗಳ ಮೂಲಕ ನಡೆಸುವುದು.
3. ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ಆ ವಿಷಯದಲ್ಲಿ ಈ ಕೆಳಗಿನಂತೆ ಪರೀಕ್ಷೆಗಳನ್ನು ನಡೆಸುವುದು–
   a. ಆಂತರಿಕ ಮೌಲ್ಯಮಾಪನ – 20 ಅಂಕಗಳು
   b. ತಾತ್ವಿಕ (ಥಿಯರಿ) ಪರೀಕ್ಷೆ – 30 ಅಂಕಗಳು
   c. ಪ್ರಾಯೋಗಿಕ ಪರೀಕ್ಷೆ – 50 ಅಂಕಗಳು

4. ವೃತ್ತಿ ಶಿಕ್ಷಣ ವಿಷಯವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ಆ ವಿಷಯದಲ್ಲಿ ತೇರ್ಗಡೆಯಾಗಲು ತಾತ್ವಿಕ ಪರೀಕ್ಷೆಯಲ್ಲಿ ಕನಿಷ್ಠ 10 ಅಂಕಗಳನ್ನು ಮತ್ತು ಪ್ರಾಯೋಗಿಕ ಪರೀಕ್ಷೆಯಲ್ಲಿ ಕನಿಷ್ಠ 18 ಅಂಕಗಳನ್ನು ಗಳಿಸಬೇಕು. ಆಂತರಿಕ ಮೌಲ್ಯಮಾಪನದಲ್ಲಿ ಪಡೆದ ಅಂಕಗಳನ್ನು ವಿದ್ಯಾರ್ಥಿಗೆ ನೀಡಲಾಗುವ ಪ್ರಮಾಣ ಪತ್ರದಲ್ಲಿ ನಮೂದಿಸುವುದು. ಇದನ್ನು ಅಭ್ಯರ್ಥಿಯ ತೇರ್ಗಡೆಗೆ ಪರಿಗಣಿಸಲಾಗುವುದಿಲ್ಲ.
5. ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ನೀಡುವಾಗ ಈಗಿನ ಒಂದೇ ಅಂಕಪಟ್ಟಿ ಪದ್ಧತಿಯನ್ನು ಮುಂದುವರೆಸುವುದು ಹಾಗೂ ಅದರಲ್ಲಿ ವೃತ್ತಿ ಶಿಕ್ಷಣಕ್ಕೆ ಸಂಬಂಧಿಸಿದ ಸೂಕ್ತ ಮಾರ್ಪಾಡುಗಳನ್ನು ಮಾಡಿಕೊಳ್ಳತಕ್ಕದ್ದು.
6. ವೃತ್ತಿ ಶಿಕ್ಷಣದ ತಾತ್ವಿಕ ಮತ್ತು ಪ್ರಾಯೋಗಿಕ ಪರೀಕ್ಷೆಗಳಲ್ಲಿ ಅಭ್ಯರ್ಥಿಯು ತೇರ್ಗಡೆ ಹೊಂದದಿದ್ದಲ್ಲಿ ಪೂರಕ ಪರೀಕ್ಷೆಯನ್ನು ತೆಗೆದು ಕೊಳ್ಳಲು ಅವಕಾಶ ಕಲ್ಪಿಸುವುದು.
7. ವೃತ್ತಿ ಶಿಕ್ಷಣದ ವಿಷಯವನ್ನು ವಿನಾಯಿತಿ ಪಡೆದ ಭಾಷೆಗೆ ಸಮಾನಾಂತರ ಎಂದು ಪರಿಗಣಿಸುವುದು.
8. ವೃತ್ತಿ ಶಿಕ್ಷಣದಲ್ಲಿ ಪರೀಕ್ಷೆಗಳನ್ನು, (ಆಂತರಿಕ, ತಾತ್ವಿಕ ಮತ್ತು ಪ್ರಾಯೋಗಿಕ) ನಡೆಸುವ ಕುರಿತು ಸವಿವರವಾದ ಮಾರ್ಗಸೂಚಿಗಳನ್ನು ಸಂಬಂಧಿಸಿದ ಪರೀಕ್ಷಾ ಪ್ರಾಧಿಕಾರಗಳು ಹೊರಡಿಸತಕ್ಕದ್ದು.

ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

16/6

(ಅರ್ಪಣಾ ಪಾವಟೆ)
ಆಂತರಿಕ ಆರ್ಥಿಕ ಸಲಹೆಗಾರರು/ಉಪ ಕಾರ್ಯದರ್ಶಿ
ಶಿಕ್ಷಣ ಇಲಾಖೆ(ಯೋಜನೆ ಮತ್ತು ಇಆಡಳಿತ)

ಪ್ರತಿ:

1. ಮಹಾಲೇಖಪಾಲಕರು, ಕರ್ನಾಟಕ, ಬೆಂಗಳೂರು
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ,
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು
4. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
5. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು
8. ಕಛೇರಿ ಪ್ರತಿ